ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯ ಸಾರಿಗೆ ಇಲಾಖೆಯಲ್ಲಿರುವ ಖಾಲಿ ಹುದ್ದೆಯ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

484(567) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಸಾರಿಗೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಹುದ್ದೆಗಳ ನೇಮಕಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಜಿಲ್ಲೆಯಲ್ಲಿ ಸಂಚರಿಸುವ ಬಸ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯ ನೂರಾರು ಗ್ರಾಮದಲ್ಲಿ ಬಸ್ ಸಂಚರಿಸುತ್ತಿಲ್ಲ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಜಿಲ್ಲೆಯಲ್ಲಿರುವ ಬಸ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಜಿಲ್ಲೆಯಲ್ಲಿರುವ ಮಿನಿ ಬಸ್ ನಿಲ್ದಾಣಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು) ನಿರ್ಮಾಣಗೊಂಡಿರುವ ಬಸ್ ನಿಲ್ದಾಣಗಳು ಉಪಯೋಗಕ್ಕೆ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ?